

## ಶಾಸಕ ಸ್ಥಾನಕ್ಕೆ ಎಚ್‌ಡಿಕೆ, ಬೊಮ್ಮಾಯಿ, ಕೋಟ ರಾಜೀನಾಮೆ

# 3+1 ಬೈ-ಎಲೆಕ್ಷನ್ ಸನ್ನಿಹಿತ

ಎಚ್.ಡಿ.ಕುಮಾರಸ್ವಾಮಿ, ಬಸವರಾಜ ಬೊಮ್ಮಾಯಿ ಶನಿವಾರ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಭೇಟಿ ಮಾಡಿ ಶಾಸಕ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದರು. ಕೋಟ ಶ್ರೀನಿವಾಸ ಪೂಜಾರಿ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿಗೆ ರಾಜೀನಾಮೆ ಪತ್ರ ಸಲ್ಲಿಸಿದರು.

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ರಾಜ್ಯದಲ್ಲಿ ಲೋಕಸಭೆ, ವಿಧಾನ ಪರಿಷತ್ ಚುನಾವಣೆ ಫಲಿತಾಂಶದ ಕಾವು ತಣ್ಣಗಾಗುವ ಮುನ್ನವೇ ಮೂರು ವಿಧಾನಸಭೆ ಕ್ಷೇತ್ರಗಳು ಹಾಗೂ ಒಂದು ವಿಧಾನ ಪರಿಷತ್ ಕ್ಷೇತ್ರದ ಉಪ ಚುನಾವಣೆಗೆ ಭೂಮಿಕೆ ಸಿದ್ಧವಾಗಿದೆ.

ಲೋಕಸಭೆಗೆ ಆಯ್ಕೆಯಾಗಿರುವ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಬಿಜೆಪಿಯ ಸಂಸದ ಬಸವರಾಜ ಬೊಮ್ಮಾಯಿ, ವಿಧಾನ ಪರಿಷತ್ ಸದಸ್ಯ ಕೋಟ ಶ್ರೀನಿವಾಸ ಪೂಜಾರಿ ಶಾಸಕ ಸ್ಥಾನಕ್ಕೆ ಶನಿವಾರ ರಾಜೀನಾಮೆ ಸಲ್ಲಿಸಿದರು. ಬಳ್ಳಾರಿ ಲೋಕಸಭೆ ಕ್ಷೇತ್ರದಿಂದ ಆಯ್ಕೆಯಾಗಿರುವ ಕಾಂಗ್ರೆಸ್‌ನ ಈ.ತುಕಾರಾಂ ಶುಕ್ರವಾರವೇ ರಾಜೀನಾಮೆ ನೀಡಿದ್ದರು. ಎಚ್‌ಡಿಕೆ, ಬೊಮ್ಮಾಯಿ ಖುದ್ದು ಭೇಟಿಯಾಗಿ ಸಲ್ಲಿಸಿದ ರಾಜೀನಾಮೆ ಪತ್ರವನ್ನು ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಶನಿವಾರ ಸ್ವೀಕರಿಸಿದರು.

ಮೂವರು ಶಾಸಕರ ರಾಜೀನಾಮೆಯನ್ನು ವಿಧಾನಸಭಾಧ್ಯಕ್ಷ ಅಂಗೀಕರಿಸಿದ್ದಾರೆ. ಮೂರು ಸ್ಥಾನಗಳು ತೆರವಾಗಿವೆ ಎಂದು ವಿಧಾನಸಭೆ ಕಾರ್ಯದರ್ಶಿ ಎಂ.ಕೆ. ವಿಶಾಲಾಕ್ಷಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರಿಗೆ ವಿಧಾನ ಪರಿಷತ್ ಪ್ರತಿಪಕ್ಷ ನಾಯಕರೂ ಆದ ಕೋಟ ಶ್ರೀನಿವಾಸ ಪೂಜಾರಿ ಶನಿವಾರ ತಮ್ಮ ರಾಜೀನಾಮೆ ಪತ್ರ ಸಲ್ಲಿಸಿದರು. ● ಪುಟ 5B

### ರಾಜಕೀಯ ಪಕ್ಷಗಳಲ್ಲಿ ತಾಲೀಮು ಶುರು

ಬಿಜೆಪಿಯ ಎರಡು, ಕಾಂಗ್ರೆಸ್ ಮತ್ತು ಜೆಡಿಎಸ್‌ನ ತಲಾ ಒಂದು ಸ್ಥಾನ ತೆರವಾಗಿವೆ. ಬದಲಾದ ರಾಜಕೀಯ ಲೆಕ್ಕಾಚಾರದಿಂದ ಎನ್‌ಡಿಎ 3+1, ಕಾಂಗ್ರೆಸ್ ಒಂದು ಸ್ಥಾನದ ಉಪ ಚುನಾವಣೆಗೆ ಪೂರ್ವಭಾವಿ ತಾಲೀಮು ನಡೆಸಿವೆ. ವಿಧಾನಸಭೆ ಚುನಾವಣೆಯಲ್ಲಿ ಭರ್ಜರಿ ಜಯಗಳಿಸಿದ್ದ ಕಾಂಗ್ರೆಸ್, ಲೋಕಸಭೆ ಚುನಾವಣೆಯಲ್ಲೂ ಅದೇ ಯಶೋಗಾಥೆ ಮುಂದುವರಿಸಲು ಸಾಧ್ಯವಾಗಿಲ್ಲ. ಈ ಕಾರಣಕ್ಕೆ ಮೂರು ವಿಧಾನಸಭೆ ಕ್ಷೇತ್ರಗಳ ಉಪಚುನಾವಣೆಯನ್ನು ಪಕ್ಷದ ರಾಜ್ಯ ನಾಯಕರು, ಹೈಕಮಾಂಡ್ ಗಂಭೀರವಾಗಿ ಪರಿಗಣಿಸಿದ್ದು, ಅಳೆದು-ತೂಗಿ ಅಭ್ಯರ್ಥಿಗಳ ಆಯ್ಕೆಗೆ ನಿರ್ಧರಿಸಿದ್ದಾರೆ.

“ಸಂಸತ್ತಿನಲ್ಲಿ ಪ್ರಾಮಾಣಿಕವಾಗಿ ಕನ್ನಡಿಗರ ಪರವಾಗಿ ಧ್ವನಿಎತ್ತುವೆ. ಅಂತಾರಾಜ್ಯ ನೀರಾವರಿ ಯೋಜನೆಗಳಿಗೆ ಪರಿಹಾರ ಕಂಡುಕೊಳ್ಳುವ ಪ್ರಯತ್ನ ಮಾಡುತ್ತೇನೆ. ಲೋಕಸಭೆಗೆ ಆಯ್ಕೆಯಾಗಿ ದೆಹಲಿಗೆ ಹೋಗಿದ್ದರೂ ಕರ್ನಾಟಕ ರಾಜಕಾರಣದಲ್ಲಿ ಸಕ್ರಿಯನಾಗಿರುತ್ತೇನೆ.

| ಬಸವರಾಜ ಬೊಮ್ಮಾಯಿ ಸಂಸದ

“ಚಿಂತಕರ ಚಾವಡಿ ಎಂದೇ ಕರೆಯುವ ಮೇಲ್ಮನೆಗೆ ನನ್ನಂತಹ ಸಾಮಾನ್ಯನೊಬ್ಬ 4 ಬಾರಿ ಆಯ್ಕೆಯಾದದ್ದು ಸೌಭಾಗ್ಯವೇ ಸರಿ. ರಾಜಕೀಯ ಧ್ರುವೀಕರಣದಲ್ಲಿ ಲೋಕಸಭೆ ಚುನಾವಣೆಗೆ ಸ್ಪರ್ಧಿಸಿ ಗೆದ್ದಿರುವೆ. ದುಗುಡದಿಂದಲೇ ಪರಿಷತ್ ಸದಸ್ಯತ್ವಕ್ಕೆ ರಾಜೀನಾಮೆ ನೀಡಿರುವೆ.

| ಕೋಟ ಶ್ರೀನಿವಾಸ ಪೂಜಾರಿ ಸಂಸದ

### ಕಾಂಗ್ರೆಸ್ ಲೆಕ್ಕಾಚಾರ

ಒಲ್ಲದ ಮನಸ್ಸಿನಿಂದಲೇ ಲೋಕಸಭೆ ಚುನಾವಣೆಗೆ ಸ್ಪರ್ಧಿಸಿ ಈ.ತುಕಾರಾಮ್ ನಿರೀಕ್ಷೆಗೂ ಮೀರಿದ ಮತಗಳ ಅಂತರದಿ ಗೆಲುವು ಸಾಧಿಸಿ, ಮೊದಲ ಸಲ ಲೋಕಸಭೆಗೆ ಪದಾಪ ಮಾಡಿದ್ದಾರೆ. ಮೂಲಗಳ ಪ್ರಕಾರ ತುಕಾರಾಮ್ ಷರತ್ತುಬದ್ಧ ಲೋಕಸಭೆ ಚುನಾವಣೆಗೆ ಸ್ಪರ್ಧಿಸಲು ಒಪ್ಪಿದ್ದು, ಕಾ

# 3 ಶಾಸಕರ ರಾಜೀನಾಮೆ: ಉಪ ಚುನಾವಣೆ ಯಾವಾಗ?




## ಬಸವರಾಜ ಬೊಮ್ಮಾಯಿ, ಎಚ್‌ಡಿಕೆ, ಕೋಟ ಶ್ರೀನಿವಾಸ್ ಪೂಜಾರಿ, ಇ. ತುಕಾರಾಂ ರಾಜೀನಾಮೆ I ರಾಜ್ಯಪಾಲರಿಂದ ರಾಜೀನಾಮೆ ಅಂಗೀಕಾರ

**■ ಉದಯವಾಣಿ ಸಮಾಚಾರ**

**ಬೆಂಗಳೂರು:** ಲೋಕಸಭೆ ಚುನಾವಣೆಯಲ್ಲಿ ಗೆದ್ದ ಹಿನ್ನೆಲೆ ಮಾಜಿ ಸಿಎಂಗಳಾದ ಬಸವರಾಜ್ ಬೊಮ್ಮಾಯಿ, ಎಚ್‌.ಡಿ. ಕುಮಾರಸ್ವಾಮಿ, ವಿಧಾನ ಪರಿಷತ್‌ನ ಪ್ರತಿಪಕ್ಷ ನಾಯಕರಾಗಿದ್ದ ಕೋಟ ಶ್ರೀನಿವಾಸ ಪೂಜಾರಿ ಅವರು ತಮ್ಮ ಶಾಸಕ ಸ್ಥಾನಗಳಿಗೆ ರಾಜೀನಾಮೆ ಸಲ್ಲಿಸಿದ್ದಾರೆ.

ಶುಕ್ರವಾರವಷ್ಟೇ ಸಂಡೂರು ಕಾಂಗ್ರೆಸ್ ಶಾಸಕ ಸ್ಥಾನಕ್ಕೆ ಇ.ತುಕಾರಾಂ ರಾಜೀನಾಮೆ ಸಲ್ಲಿಸಿದ್ದರು. ಸಂಸದರಾಗಿ ಆಯ್ಕೆಯಾದ 15 ದಿನಗಳೊಳಗಾಗಿ ಎರಡಲ್ಲಿ ಯಾವುದಾದರೊಂದು ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಬೇಕಿತ್ತು. ಹೀಗಾಗಿ ಸಂಸತ್ ಸದಸ್ಯ ಸ್ಥಾನವನ್ನು ಉಳಿಸಿಕೊಂಡಿರುವ ನಾಯಕರು, ಶನಿವಾರ ವಿಧಾನಸೌಧದಲ್ಲಿ ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಅವರನ್ನು ಭೇಟಿ ಮಾಡಿ ವಿಧಾನಸಭಾ ಸದಸ್ಯ ಸ್ಥಾನಗಳಿಗೆ ರಾಜೀನಾಮೆ ನೀಡಿದ್ದಾರೆ. ಇದೇ ವೇಳೆ ನಿರ್ಗಮಿತ ಶಾಸಕರಿಗೆ ಸ್ಪೀಕರ್ ಖಾದರ್ ಶುಭ ಹಾರೈಸಿದರು.

ಇತ್ತ ಕೋಟ ಶ್ರೀನಿವಾಸ ಪೂಜಾರಿ ಅವರು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರಿಗೆ ಪರಿಷತ್ ಸದಸ್ಯ ಸ್ಥಾನಕ್ಕೆ ರಾಜೀನಾಮೆ ಕೊಟ್ಟಿದ್ದಾರೆ. ರಾಜ್ಯಪಾಲ ಥಾವರಚಂದ್ ಗೆಹಲೋತ್ ರಾಜೀನಾಮೆಅಂಗೀಕರಿಸಿದ್ದಾರೆ.

ಮಾಜಿ ಸಿಎಂಗಳಾದ ಬಸವರಾಜ್ ಬೊಮ್ಮಾಯಿ, ಎಚ್‌.ಡಿ. ಕುಮಾರಸ್ವಾಮಿ, ಎಂಎಲ್ಸಿ ಕೋಟ ಶ್ರೀನಿವಾಸ ಪೂಜಾರಿ ರಾಜೀನಾಮೆ ಸಲ್ಲಿಸಿದರು.

**ಯಾವ ಕ್ಷೇತ್ರಗಳಿಗೆ ಚುನಾವಣೆ?:** 2023ರ ವಿಧಾನಸಭೆ ಚುನಾವಣೆಯಲ್ಲಿ ಚನ್ನಪಟ್ಟಣ ಕ್ಷೇತ್ರದಿಂದ ಗೆದ್ದ ಜೆಡಿಎಸ್ ಎಚ್‌.ಡಿ. ಕುಮಾರಸ್ವಾಮಿ 2024ರ ಲೋಕಸಭೆ ಚುನಾವಣೆಯಲ್ಲಿ ಮಂಡ್ಯದಿಂದ ಗೆದ್ದು ಕೇಂದ್ರ ಸಚಿವರಾಗಿದ್ದಾರೆ. ಶಿಗ್ಗಾಂವಿ ಕ್ಷೇತ್ರದಿಂದ ಗೆದ್ದಿದ್ದ ಬಸವರಾಜ ಬೊಮ್ಮಾಯಿ ಪ್ರಸ್ತುತ ಹಾವೇರಿ ಲೋಕಸಭಾ ಕ್ಷೇತ್ರದಿಂದ ಚುನಾಯಿತಗೊಂಡಿದ್ದಾರೆ. ಸಂಡೂರು ಕ್ಷೇತ್ರದಿಂದ ವಿಜೇತರಾದ ತುಕಾರಾಂ ಬಳ್ಳಾರಿ ಲೋಕಸಭಾ ಕ್ಷೇತ್ರದಿಂದ ಗೆದ್ದಿದ್ದಾರೆ. ಇತ್ತ ಸ್ಥಳೀಯ ಸಂಸ್ಥೆಗಳಿಂದ ವಿಧಾನಪರಿಷತ್‌ಗೆ ಆಯ್ಕೆಯಾದ ಕೋಟ ಶ್ರೀನಿವಾಸ ಪೂಜಾರಿ ಉಡುಪಿ-ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದಿಂದ ಗೆದ್ದಿದ್ದು ನಾಲ್ವರ ಅವಧಿ 2028ರವರೆ ಇತ್ತು.

**ಶೀಘ್ರ ಉಪಚುನಾವಣೆ ಘೋಷಣೆ:** ವಿಧಾನ ಸಭೆಯಲ್ಲಿ ಕಾಂಗ್ರೆಸ್, ಬಿಜೆಪಿ, ಜೆಡಿಎಸ್‌ನ ಒಂದೊಂದು ಸ್ಥಾನಗಳು ಈ ರಾಜೀನಾಮೆಯಿಂದ ತೆರವಾಗಿದ್ದು, ಈ ಸ್ಥಾನಗಳಿಗೆ 6 ತಿಂಗಳೊಳಗಾಗಿ ಉಪಚುನಾವಣೆ ನಡೆಯಬೇಕಿದೆ. ಸದ್ಯದಲ್ಲೇ ಘೋಷಣೆಯಾಗಲಿದೆ. ಚನ್ನಪಟ್ಟಣದಲ್ಲಿ ಮೈತ್ರಿ ಅಭ್ಯರ್ಥಿಯಾಗಿ ನಿಖಿಲ್ ಕುಮಾರಸ್ವಾಮಿ ಅಥವಾ ಸಿ.ಪಿ. ಯೋಗೇಶ್ವರ್ ಸ್ಪರ್ಧಿಸುವ ಸಾಧ್ಯತೆ ಸದ್ಯಕ್ಕಿದೆ. ಕಾಂಗ್ರೆಸ್‌ನಿಂದ ಇದುವರೆಗೂ ನಿಗದಿಯಾಗಿಲ್ಲ.

> ಕೇಂದ್ರದ ಸಚಿವನಾಗಿ ರಾಜ್ಯದ ಅಭಿವೃದ್ಧಿಗೆ ಶ್ರಮಿಸುತ್ತೇನೆ. ಚನ್ನಪಟ್ಟಣದಿಂದ ಯಾರು ಸ್ಪರ್ಧಿಸುತ್ತಾರೆ? ವಿಧಾನ ಸಭೆಯಲ್ಲಿ ಯಾರು ಜೆಡಿಎಸ್ ನಾಯಕರಾಗಿರುತ್ತಾರೆ ಎಂಬುದಕ್ಕೆ ಶೀಘ್ರವೇ ಉತ್ತರ ಸಿಗಲಿದೆ.
>
> ● ಎಚ್‌.ಡಿ. ಕುಮಾರಸ್ವಾಮಿ, ಸಚಿವ

> ಸಂಸದನಾಗಿ ಶಿಗ್ಗಾಂವಿ ಸೇರಿ ಇಡೀ ಜಿಲ್ಲೆಯ ಸಮಗ್ರ ಅಭಿವೃದ್ಧಿ ಮಾಡುವ ಜವಾಬ್ದಾರಿ ನನ್ನ ಹೆಗಲ ಮೇಲಿದೆ. ಕೇಂದ್ರ ಸರ್ಕಾರದ ಜತೆಗೂಡಿ ಈ ಜವಾಬ್ದಾರಿಯನ್ನು ನಿಭಾಯಿಸುತ್ತೇನೆ.
>
> ● ಬಸವರಾಜ ಬೊಮ್ಮಾಯಿ, ಸಂಸದ

# ಎಚ್ಡಿಕೆ, ಬೊಮ್ಮಾಯಿ, ಕೋಟ ರಾಜೀನಾಮೆ

**ವಿಕ ಸುದ್ದಿಲೋಕ** ಬೆಂಗಳೂರು

ಲೋಕಸಭೆಗೆ ಚುನಾಯಿತರಾಗಿರುವ ಮಾಜಿ ಸಿಎಂಗಳಾದ ಎಚ್.ಡಿ. ಕುಮಾರಸ್ವಾಮಿ ಮತ್ತು ಬಸವರಾಜ ಬೊಮ್ಮಾಯಿ ಅವರು ಶನಿವಾರ ಶಾಸಕ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ.

ವಿಧಾನಸೌಧ ಕಚೇರಿಯಲ್ಲಿ ಸ್ಪೀಕರ್ ಯು.ಟಿ. ಖಾದರ್ ಅವರನ್ನು ಪ್ರತ್ಯೇಕವಾಗಿ ಭೇಟಿ ಮಾಡಿದ ಕುಮಾರಸ್ವಾಮಿ ಅವರು ಚನ್ನಪಟ್ಟಣ ಕ್ಷೇತ್ರದ ಶಾಸಕ ಸ್ಥಾನಕ್ಕೆ ಹಾಗೂ ಬಸವರಾಜ ಬೊಮ್ಮಾಯಿ ಅವರು ಶಿಗ್ಗಾಂವಿ ಕ್ಷೇತ್ರದ ಶಾಸಕ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದರು. ಬಳ್ಳಾರಿ ಲೋಕಸಭಾ ಕ್ಷೇತ್ರದಿಂದ ಆಯ್ಕೆಯಾಗಿರುವ ಈ. ತುಕಾರಾಮ್ ಅವರು ಸಂಡೂರು ವಿಧಾನಸಭಾ ಕ್ಷೇತ್ರದ ಸದಸ್ಯತ್ವಕ್ಕೆ ಶುಕ್ರವಾರವೇ ರಾಜೀನಾಮೆ ಸಲ್ಲಿಸಿದ್ದರು.

ಮೂವರ ರಾಜೀನಾಮೆಯನ್ನೂ ಸಭಾಧ್ಯಕ್ಷ ಯು.ಟಿ. ಖಾದರ್ ಅವರು ಶನಿವಾರದಿಂದಲೇ ಜಾರಿಗೆ ಬರುವಂತೆ ಅಂಗೀಕರಿಸಿದ್ದಾರೆ. ಇದರೊಂದಿಗೆ, 16ನೇ ರಾಜ್ಯ ವಿಧಾನಸಭೆಯಲ್ಲಿ ಚನ್ನಪಟ್ಟಣ, ಶಿಗ್ಗಾಂವಿ ಮತ್ತು ಸಂಡೂರು ಎಸ್‌ಟಿ ಮೀಸಲು ಕ್ಷೇತ್ರಗಳು ತೆರವಾಗಿದ್ದು, ಮೂರೂ ಕ್ಷೇತ್ರಗಳಿಗೆ ಉಪಚುನಾವಣೆ ನಡೆಯಬೇಕಿದೆ.

**ಕೋಟ ರಾಜೀನಾಮೆ:** ಉಡುಪಿ-ಚಿಕ್ಕಮಗಳೂರು ಕ್ಷೇತ್ರದಿಂದ ಲೋಕಸಭೆಗೆ ಆಯ್ಕೆಯಾಗಿರುವ ಮೇಲ್ಮನೆ ಪ್ರತಿಪಕ್ಷ ನಾಯಕ ಕೋಟ ಶ್ರೀನಿವಾಸ ಪೂಜಾರಿ ವಿಧಾನ ಪರಿಷತ್ ಸದಸ್ಯತ್ವಕ್ಕೆ ರಾಜೀನಾಮೆ ಸಲ್ಲಿಸಿದರು. ಸಭಾಪತಿ ಬಸವರಾಜ ಹೊರಟ್ಟಿ ಅವರನ್ನು ಭೇಟಿ ಮಾಡಿ ಕೋಟ ಅವರು ರಾಜೀನಾಮೆ ಸಲ್ಲಿಸಿದರು. ಇದರೊಂದಿಗೆ, ಪರಿಷತ್‌ನಲ್ಲಿ ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಒಂದು ಸ್ಥಾನದ ಜತೆಗೆ, ಪ್ರತಿಪಕ್ಷ ನಾಯಕ ಸ್ಥಾನವೂ ತೆರವಾದಂತಾಗಿದೆ.

**ಹೊರಟ್ಟಿ ಭೇಟಿ:** ಶಾಸಕ ಸ್ಥಾನಗಳಿಗೆ ರಾಜೀನಾಮೆ ಸಲ್ಲಿಸಿದ ಬಳಿಕ ಕುಮಾರಸ್ವಾಮಿ ಹಾಗೂ ಬಸವರಾಜ ಬೊಮ್ಮಾಯಿ ಅವರು ಸಭಾಪತಿ ಬಸವರಾಜ ಹೊರಟ್ಟಿ ಅವರನ್ನು ಭೇಟಿಯಾದರು. ಈ ಸಂದರ್ಭದಲ್ಲಿ ಹೊರಟ್ಟಿ ಅವರು ಕೇಂದ್ರ ಸಂಪುಟದಲ್ಲಿ ಉಕ್ಕು ಮತ್ತು ಭಾರಿ ಕೈಗಾರಿಕೆ ಸಚಿವರಾಗಿರುವ ಕುಮಾರಸ್ವಾಮಿ ಅವರನ್ನು ಅಭಿನಂದಿಸಿ, ಸನ್ಮಾನಿಸಿದರು.